# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **760** |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ ಬುಡ್ನ ಸಿದ್ದಿ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 18-08-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರ ತಾಲ್ಲೂಕಿನ ಯಲ್ಲಾಪುರದ ಕಾಳಮ್ಮ ನಗರದಲ್ಲಿರುವ ಪರಿಶಿಷ್ಟ ಪಂಗಡದ ಮತ್ತು ಇತರೆ ಸಮುದಾಯಗಳ ಕೆಲವು ಮನೆಗಳಿಗೆ ಇಲ್ಲಿಯವರೆಗೂ ವಿದ್ಯುತ್ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರ ತಾಲ್ಲೂಕಿನ ಯಲ್ಲಾಪುರದ ಕಾಳಮ್ಮ ನಗರದಲ್ಲಿರುವ ಪರಿಶಿಷ್ಟ ಪಂಗಡದ ಮತ್ತು ಇತರೆ ಸಮುದಾಯಗಳ ಕೆಲವು ಕಚ್ಚಾ ಮನೆಗಳಿಗೆ ಇಲ್ಲಿಯವರೆಗೂ ವಿದ್ಯುತ್ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಸದರಿ ಮನೆಗಳಿಗೆ (ಕಚ್ಚಾ ಮನೆ) ವಿದ್ಯುತ್ ಸಂಪರ್ಕ ನೀಡುವಂತೆ ಮನವಿಗಳು ಸ್ವೀಕೃತಗೊಂಡಿರುತ್ತವೆ. ಆದರೆ, ವಿದ್ಯುತ್ ಸಂಪರ್ಕ ನೀಡಲು KERC ನಿಯಮದಂತೆ ಅಗತ್ಯವಿರುವ ದಾಖಲಾತಿಗಳಾದ ವಾರಸುದಾರಿಕೆ ರುಜುವಾತು/ ಮಾಲೀಕತ್ವದ ಪುರಾವೆ/ ಅನುಭವದ ರುಜುವಾತು/ ಸ್ಥಳೀಯ ಪ್ರಾಧಿಕಾರದ ಅನುಮತಿ ಪತ್ರ ಒದಗಿಸಿರದ ಕಾರಣ ಅರ್ಜಿ ನೊಂದಾವಣೆಗೊಂಡಿರುವುದಿಲ್ಲ.<br><br>ಇದಲ್ಲದೇ, ಸದರಿ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡಬಾರದೆಂದು ಜಮೀನಿನ ವಾರಸುದಾರರೆಂದು ಹೇಳಿಕೊಂಡಿರುವವರು ಮನವಿ ಸಲ್ಲಿಸಿರುತ್ತಾರೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಆದ್ಯತೆಯ ಮೇರೆಗೆ ಸದರಿ ಮನೆಗಳಿಗೆ ವಿದ್ಯುತ್ ಕಲ್ಪಿಸಲು ತೆಗೆದುಕೊಳ್ಳುವ ಕ್ರಮಗಳು ಮತ್ತು ಯಾವ ಕಾಲಮಿತಿಯೊಳಗೆ ಇದನ್ನು ಪೂರ್ಣಗೊಳಿಸಲಾಗುವುದು? | |

ಸಂಖ್ಯೆ: ಎನರ್ಜಿ 181 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು